ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಆಯುಕ್ತರು ರವರ ಕಛೇರಿ, ಪಾಲಿಕೆಯ ಮುಖ್ಯ ಕಛೇರಿಗಳು ನರಸಿಂಹರಾಜ ಚೌಕ, ಬೆಂಗಳೂರು-560 002.

ಸಂಖ್ಯೆ:ಆ/ಪಿಆರ್/ 673 /19-20 ದಿನಾಂಕ: 10-06-2019

ಮುಖ್ಯ ಅಭಿಯಂತರರು (ಪೂರ್ವ, ಪಶ್ಚಿಮ, ದಕ್ಷಿಣ, ಮಹದೇವಪುರ, ರಾಜರಾಜೇಶ್ವರಿನಗರ, ದಾಸರಹಳ್ಳಿ, ಯಲಹಂಕ, ಯೋಜನೆ-ಕೇಂದ್ರ , ಟಿಪಿಸಿಸಿ ಮತ್ತು ರಸ್ತೆ ಮೂಲಭೂತ ಸೌಕರ್ಯ, ಬೃಹತ್ ನೀರುಗಾಲುವೆ, ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಕೆರೆಗಳು ಮತ್ತು ಟಿಪಿಸಿಸಿ

ಕಛೇರಿ ಆದೇಶ

ವಿಷಯ:-ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 2019-20ನೇ ಸಾಲಿನ ಪಾಲಿಕೆ ಆಯವ್ಯಯದಲ್ಲಿ ವಿವಿಧ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ನಿಗಧಿಪಡಿಸಿದ ಅನುದಾನದ ಅತೀ ತುರ್ತು ಕಾಮಗಾರಿಗಳನ್ನು ಮೇ||ಕೆ.ಆರ್.ಐ.ಡಿ.ಎಲ್ ಮುಖಾಂತರ ಅನುಷ್ಠಾನಗೊಳಿಸಲು ಬಗ್ಗೆ.

ಉಲ್ಲೇಖ:-(1)ಕರ್ನಾಟಕ ಸರ್ಕಾರದ ಅಧೀನ ಕಾರ್ಯದರ್ಶಿ ಕಛೇರಿ ಆದೇಶ ಸಂಖ್ಯೆ:ಆಇ/541/ಮೆಚ್ಚ-12/2019, ದಿ:29.05.19
(2)ಈ ಕಛೇರಿಯ ಪತ್ರದ ಸಂಖ್ಯೆ:ಆ/ಪಿಆರ್/5054/2017-18, ದಿ:20-11-2017.

.....

ಮೇಲ್ಕಂಡ ಉಲ್ಲೇಖಕ್ಕೆ ವಿಷಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ರೂರಲ್ ಇನ್ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (ಕೆ.ಆರ್.ಐ.ಡಿ.ಎಲ್) ಹಿಂದಿನ ಕೆ.ಎಲ್.ಸಿ. 2019-20ನೇ ಸಾಲಿನಲ್ಲಿ ನೇರವಾಗಿ ಕಾಮಗಾರಿಗಳನ್ನು ನಿರ್ವಹಿಸಲು ಸರ್ಕಾರದ ಇಲಾಖೆಗಳು ಮತ್ತು ಇತರೆ ಸಂಗ್ರಹಣಾ ಸಂಸ್ಥೆಗಳ ಕಾಮಗಾರಿಗಳನ್ನು ಪಾರದರ್ಶಕತೆ ಅಧಿನಿಯಮ -1999 ರ ಕಲಂ 4(ಜಿ) ರಡಿ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿ ಸರ್ಕಾರದ ಉಲ್ಲೇಖ-1 ರ ಸ್ಥಯ ಆದೇಶ ಜಾರಿ ಮಾಡಿರುತ್ತದೆ.

"2019-20 ನೇ ಸಾಲಿನಲ್ಲಿ ಕಾಮಗಾರಿಗಳನ್ನು ನಿರ್ವಹಿಸಲು ಸರ್ಕಾರದ ಇಲಾಖೆಗಳು ಮತ್ತು ಇತರೆ ಸಂಗ್ರಹ ಸಂಸ್ಥೆಗಳ ಕಾಮಗಾರಿಗಳನ್ನು ಪಾರದರ್ಶಕ ಅಧಿನಿಯಮ - 1999 ರ ಕಲಂ 4 (ಜಿ) ಅಡಿ ಪಾರದರ್ಶಕ ಕಾಯ್ದೆಯಿಂದ ವಿನಾಯಿತಿ ನೀಡಿ ಸರ್ಕಾರವು ಅಧಿಸೂಚನೆ ಜಾರಿ ಮಾಡಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ 2019-20ನೇ ಸಾಲಿನ ಪಾಲಿಕೆ ಆಯವ್ಯಯದಲ್ಲಿ ನಿಗಧಿಪಡಿಸಿದ ಅನುದಾನದ ಕಾಮಗಾರಿಗಳನ್ನು ಮೇಲ್ಕಂಡ ಉಲ್ಲೇಖ (2) ರ ಅಡಿಯಲ್ಲಿ ಆದೇಶಿಸಿದಂತೆ ಪ್ರತಿ ಕಾಮಗಾರಿಗಳನ್ನು (ರೂ.50.00 ಲಕ್ಷಗಳಿಗೆ ಮೀರದಂತಹ ಕಾಮಗಾರಿಗಳು) ಡ್ಯಾಡಂಮೈಜೇಷನ್ ಮಾಡಿ ಸದರಿ ಆದೇಶದಂತೆ ಕ್ರಮವಹಿಸಿ ಇತರೆ ವರ್ಗಕ್ಕೆ ಮೀಸಲಿಡಲಾದ ತುರ್ತು ಕಾಮಗಾರಿಗಳನ್ನು ಮುಖ್ಯ ಅಭಿಯಂತರರು ರವರ ಶಿಫಾರಸ್ಸಿನಂತೆ (ಪೂಜ್ಯ ಮಹಾಪೌರರು ಹಾಗೂ ಉಪ ಮಹಾಪೌರರು ಆಜ್ಞೆ ಮಾಡುವ ವಿಶೇಷ ಕಾಮಗಾರಿಗಳನ್ನು ಹೊರತುಪಡಿಸಿ) ಸಂಬಂಧಪಟ್ಟ ಸ್ಥಾಯಿ ಸಮಿತಿಯ ಅನುಮೋದನೆ ಪಡೆದು ತದನಂತರ ಮೇಲ್ಕಂಡ ಉಲ್ಲೇಖ (1) ರ ಅಡಿಯಲ್ಲಿ ಪ್ರಸ್ತಾಪಿತ ಪರತ್ತುಗಳಿಗೆ ನಿಯಮಾನುಸಾರ ಕ್ರಮವಹಿಸಿ ಮೇ||ಕೆ.ಆರ್.ಐ.ಡಿ.ಎಲ್ ಮುಖಾಂತರ ಅನುಷ್ಠಾನಗೊಳಿಸಲು ಸೂಚಿಸಿದೆ".

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ 2019-20ನೇ ಸಾಲಿನ ಪಾಲಿಕೆಯ ಆಯವ್ಯಯದಲ್ಲಿ ನಿಗಧಿಪಡಿಸಿದ ಅನುದಾನದ ಕಾಮಗಾರಿಗಳನ್ನು (ರಾಜ್ಯ ಹಣಕಾಸು ಆಯೋಗದ ಅನುದಾನ, 14ನೇ ಹಣಕಾಸ ಆಯೋಗದ ಅನುದಾನ, ಸ್ವಚ್ಛ ಭಾರತ್ ಮತ್ತು ಘನ ಸರ್ಕಾರದ ಅನುಮೋದಿತ ಕಾಮಗಾರಿಗಳನ್ನು ಹೊರತುಪಡಿಸಿ) ಸಂಬಂಧಪಟ್ಟ ಸ್ಥಾಯಿ ಸಮಿತಿ ಅನುಮೋದನೆ ಪಡೆದು, ತದನಂತರ ಉಲ್ಲೇಖ (1) ರಲ್ಲಿ ಪ್ರಸ್ತಾಪಿತ ಪರತ್ತಿನಂತೆ ನಿಯಮಾನುಸಾರ ಕ್ರಮವಹಿಸಿ ಮೇ||ಕೆ.ಆರ್.ಐ.ಡಿ.ಎಲ್ ಮುಖಾಂತರ ಅನುಷ್ಠಾನಗೊಳಿಸಲು ಈ ಕೆಳಕಂಡಂತೆ ಆದೇಶಿಸಿದೆ.

-1-

Scanned by CamScanner

ಆದೇಶ

"2019-20ನೇ ಸಾಲಿನ ಆಯವ್ಯಯದ ಮೇಲ್ಕಾಣಿಸಿದ ಪ್ರಸ್ತಾವನೆಗಳನ್ನು ಹೊರತುಪಡಿಸಿ (ರಾಜ್ಯ ಹಣಕಾಸು ಆಯೋಗದ ಅನುದಾನ, 14ನೇ ಹಣಕಾಸ ಆಯೋಗದ ಅನುದಾನ, ಸ್ವಚ್ಛ ಭಾರತ್ ಮತ್ತು ಘನ ಸರ್ಕಾರದ ಅನುಮೋದಿತ ಕಾಮಗಾರಿಗಳನ್ನು ಹೊರತುಪಡಿಸಿ) ಉಳಿಕೆ ಲೆಕ್ಕ ಶೀರ್ಷಿಕೆ ಅನುದಾನದ ಅಡಿಯಲ್ಲಿ ಅತೀ ತುರ್ತು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಮೆ॥ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ವಹಿಸುವ ಎಲ್ಲಾ ಪ್ರತ್ಯೇಕ ಪ್ರಸ್ತಾವನೆಗಳನ್ನು ನಿಯಮಾನುಸಾರ ಸಂಬಂಧಪಟ್ಟ ಸ್ಥಾಯಿ ಸಮಿತಿ ಅನುಮೋದನೆ ಪಡೆದು, ತದನಂತರ ಉಲ್ಲೇಖ (1) ಮತ್ತು (2) ರಲ್ಲಿ ಪ್ರಸ್ತಾಪಿತ ಷರತ್ತುಗಳಂತೆ ನಿಯಮಾನುಸಾರವಾಗಿ ಕ್ರಮವಹಿಸಲು ಮೆ॥ಕೆ.ಆರ್.ಐ.ಡಿ.ಎಲ್ ಮುಖಾಂತರ ಅನುಷ್ಠಾನಗೊಳಿಸಲು ಆದೇಶಿಸಿದೆ.

ಆಯುಕ್ತರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಗಳನ್ನು:-

1. ಪೂರ್ವ ಮಹಾಪೌರರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
2. ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
3. ಆಡಳಿತ ಪಕ್ಷದ / ವಿರೋಧ ಪಕ್ಷ / ಜೆಡಿಎಸ್ (ಪಕ್ಷ) ದ ನಾಯಕರುಗಳ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
4. ಎಲ್ಲಾ ಸ್ಥಾಯಿ ಸಮಿತಿಗಳ ಅಧ್ಯಕ್ಷರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
5. ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಹಣಕಾಸು) / ಅಪರ ಆಯುಕ್ತರು (ಆಡಳಿತ) / ಪ್ರಧಾನ ಅಭಿಯಂತರರು ರವರ ಮಾಹಿತಿಗಾಗಿ.
6. ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ / ಅಪರ ಆಯುಕ್ತರು (ಆರೋಗ್ಯ) / ಅಪರ ಆಯುಕ್ತರು (ಕಲ್ಯಾಣ) / ಮಾಹಿತಿಗಾಗಿ ಕಳುಹಿಸುತ್ತಾ ತಮ್ಮ ವ್ಯಾಪ್ತಿಯಲ್ಲಿಯ ಸಹ ಮೇಲ್ಕಂಡ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಿದೆ.
7. ಎಲ್ಲಾ ವಲಯ ಅಪರ/ಜಂಟಿ ಆಯುಕ್ತರುಗಳಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
8. ಉಪ ಆಯುಕ್ತರು (ಆಡಳಿತ) / ಮುಖ್ಯ ಲೆಕ್ಕಾಧಿಕಾರಿಗಳು / ಮುಖ್ಯ ಲೆಕ್ಕ ಪರಿಶೋಧಕರು / ಸಹಾಯಕ ನಿಯಂತ್ರಕರು (ಹಣಕಾಸು) ರವರುಗಳಿಗೆ ಕಳುಹಿಸಿದೆ.
9. ಎಲ್ಲಾ ವಲಯ ಸಹಾಯಕ ನಿಯಂತ್ರಕರು (ಹಣಕಾಸು) ರವರುಗಳಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
10. ಎಲ್ಲಾ ವಲಯ / ಯೋಜನಾ ಕಾರ್ಯಪಾಲಕ ಅಭಿಯಂತರರುಗಳಿಗೆ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
11. ಕಛೇರಿ ಆದೇಶಕ್ಕೆ.

Scanned by CamScanner